All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

10.12.2025 6.40 PM

***************

ಮುಖ್ಯಾಂಶಗಳು

- ವಿಧಾನಮಂಡಲದ ಉಭಯ ಸದನಗಳಲ್ಲಿಂದು ಉತ್ತರಕರ್ನಾಟಕದ ಸಮಸ್ಯೆ ಕುರಿತು ಚರ್ಚೆ - ವಿಶೇಷ ಆರ್ಥಿಕ ವಲಯ ರಚಿಸುವಂತೆ ಬಿಜೆಪಿ ಆಗ್ರಹ
- ಭೂ-ಪರಿವರ್ತನೆ ನಿಯಮಗಳ ಸರಳೀಕರಣಕ್ಕೆ ಕಾಯ್ದೆ ತಿದ್ದುಪಡಿ ಪರಿಷತ್‌ನಲ್ಲಿ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟನೆ
- ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿಗೆ ನಿರ್ಬಂಧವಿಲ್ಲ - ಸಚಿವ ಪ್ರಿಯಾಂಕ್ ಖರ್ಗೆ
- ಬೆಳಗಾವಿಯಲ್ಲಿ ನಾಳೆ ಸಚಿವ ಸಂಪುಟ ಸಭೆ ; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ಆಯೋಜಿಸುವ ಕುರಿತಂತೆ ಚರ್ಚೆ
- ತಳವಾರ, ಪರಿವಾರ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಚರ್ಚೆ

***************

ಸಮಾಜದಲ್ಲಿ, ಸಮುದಾಯದಲ್ಲಿ ಒಡಕು ಮೂಡಿಸಲು ಕಾರಣವಾಗುವ ದ್ವೇಷ ಭಾಷಣಗಳಿಗೆ ಕಡಿವಾಣ ಹಾಕುವ ವಿಧೇಯಕ ಸಹಿತ ೧೨ ವಿಧೇಯಕಗಳನ್ನು ವಿಧಾನಸಭೆಯಲ್ಲಿ ಇಂದು ಮಂಡಿಸಲಾಯಿತು.

ಬಳಿಕ ವಿಧಾನಸಭೆಯಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತಂತೆ ಚರ್ಚೆ ಆರಂಭಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಉತ್ತರ ಕರ್ನಾಟಕದ ಸಮಸ್ಯೆಗಳ ನಿವಾರಣೆಗೆ ಎಷ್ಟು ಹಣ ಬಿಡುಗಡೆ ಮಾಡಿದೆ ಮತ್ತು ಏನೆಲ್ಲಾ ಕ್ರಮಕೈಗೊಂಡಿದೆ ಎನ್ನುವ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಸರ್ಕಾರ ಸಕ್ಕರೆ ಕಾರ್ಖಾನೆ ಮಾಲೀಕರಿಂದ ಕಬ್ಬು ಬೆಳೆಯುವ ರೈತರ ಹಿತ ಕಾಪಾಡಲು ವಿಶೇಷ ಕಾಳಜಿ ವಹಿಸಬೇಕು ಎಂದು ಹೇಳಿದರು.

ಬಿಜೆಪಿ ಸದಸ್ಯ ಬಿ.ವೈ. ವಿಜಯೇಂದ್ರ ಮಾತನಾಡಿ, ಉತ್ತರಕರ್ನಾಟಕ ಭಾಗದ ಅಭಿವೃದ್ಧಿ ವಿಷಯದಲ್ಲಿ ರಾಜ್ಯ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಹೇಳಿದರು. ಉತ್ತರಕರ್ನಾಟಕ ಭಾಗದಲ್ಲಿ ವಿಶೇಷ ಆರ್ಥಿಕ ವಲಯ ರಚಿಸಬೇಕು. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಬೇಕು. ನೀರಾವರಿ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಕಬ್ಬು, ಮೆಕ್ಕೆಜೋಳ ಬೆಳೆದ ರೈತರಿಗೆ ವೈಜ್ಞಾನಿಕ ಬೆಲೆ ಸಿಗುವಂತೆ ಮಾಡಲು ಕ್ರಮಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಸದಸ್ಯ ಶಶಿಕಲಾ ಜೊಲ್ಲೆ ಮಾತನಾಡಿ, ಉತ್ತರಕರ್ನಾಟಕ ಭಾಗಕ್ಕೆ ಜಯದೇವ ಹೃದ್ರೋಗ ಹಾಗೂ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಮಾದರಿಯಲ್ಲಿ ಅತ್ಯಾಧುನಿಕ ಆಸ್ಪತ್ರೆ ನಿರ್ಮಿಸಬೇಕು ಎಂದು ಒತ್ತಾಯಿಸಿದರು.

***************

ಕೇಂದ್ರದಿಂದ ರಾಜ್ಯಕ್ಕೆ ಹಂಚಿಕೆ ಮಾಡಲಾದ ಎಲೆಕ್ಟ್ರಿಕ್ ಬಸ್‌ಗಳ ಕಾರ್ಯಕ್ಷಮತೆ ಹೆಚ್ಚಳಕ್ಕೆ ಒತ್ತು ನೀಡಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮೇಲ್ಮನೆಯಲ್ಲಿ ತಿಳಿಸಿದ್ದಾರೆ.

ಬಿಎಂಟಿಸಿಗೆ ೪ ಸಾವಿರದ ೫೦೦ ವಿದ್ಯುತ್ ಚಾಲಿತ ಬಸ್‌ಗಳನ್ನು ಜಿಸಿಸಿ ಮಾದರಿಯಲ್ಲಿ ಒದಗಿಸಲು ಮಂಜೂರಾತಿ ನೀಡಲಾಗಿದ್ದು, ಟೆಂಡರ್ ಜಾರಿಯಲ್ಲಿದೆ ಎಂದು ಹೇಳಿದ್ದಾರೆ.

ಬಿಜೆಪಿ ಸದಸ್ಯ ಶಶಿಲ್ ನಮೋಶಿ ಪ್ರಶ್ನೆಗೆ ಉತ್ತರಿಸಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಉತ್ತರದಿಂದ ದಕ್ಷಿಣಕ್ಕೆ ಸಂಪರ್ಕ ಕಲ್ಪಿಸುವ ಬೀದರ್-ಚಾಮರಾಜನಗರ ಹೆದ್ದಾರಿ ಕಲ್ಯಾಣಪಥ ಚತುಷ್ಪಥ ರಸ್ತೆ ನಿರ್ಮಾಣ ಕಾರ್ಯವು ಬೀದರ್, ಕಲಬುರಗಿ, ಯಾದಗಿರಿ, ಕೊಪ್ಪಳ, ರಾಯಚೂರು, ಬಳ್ಳಾರಿ, ವಿಜಯನಗರಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಭೋಜನ ವಿರಾಮದ ಬಳಿಕ ಪರಿಷತ್‌ನಲ್ಲಿ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಲಾಯಿತು.

ಬಿಜೆಪಿಯ ಹಣಮಂತ ನಿರಾಣಿ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿ, ೨೦ ವರ್ಷಗಳ ಹಿಂದೆ ಡಾ. ಡಿ.ಎಂ. ನಂಜುಂಡಪ್ಪ ನೇತೃತ್ವದ ಸಮಿತಿ ನೀಡಿದ ವರದಿಯ ಅನುಷ್ಠಾನ ಪರಿಣಾಮಕಾರಿಯಾಗಿ ಜಾರಿಗೆ ಬಂದಿಲ್ಲ ಎಂದು ತಿಳಿಸಿದರು.

ಸಮಿತಿ ೧೮ ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಬೇಕು ಎಂದು ತಿಳಿಸಿದ್ದರೂ ಇದುವರೆಗೆ ಬಿಡುಗಡೆಯಾಗಿರುವ ಮೊತ್ತ ಕೇವಲ ೧೨ ಸಾವಿರ ಕೋಟಿ ರೂಪಾಯಿ ಎಂದು ಸದನದ ಗಮನ ಸೆಳೆದರು.

ಸದನ ಸದಸ್ಯ ವಿಶ್ವನಾಥ್ ಮಾತನಾಡಿ, ಯಾವುದೇ ರಾಜ್ಯ ಅಭಿವೃದ್ಧಿ ಹೊಂದಬೇಕಾದರೆ ಅಕ್ಷರ, ಆರೋಗ್ಯ ಮತ್ತು ಅನ್ನ ಬಹಳ ಮುಖ್ಯ. ನೀರಾವರಿ ಸೌಲಭ್ಯ ಕಲ್ಪಿಸಿದರೆ ರೈತರು ಆಹಾರ ಪದಾರ್ಥ ಬೆಳೆಯಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

***************

ರಾಜ್ಯದಲ್ಲಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಪರಿವರ್ತಿಸುವ ಪ್ರಕ್ರಿಯೆಯನ್ನು ಸರಳೀಕರಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, ೧೯೬೪ರ ಕಲಂ ೯೫ರ ವಿವಿಧ ಉಪ-ಕಲಂಗಳಿಗೆ ತಿದ್ದುಪಡಿ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಸದಸ್ಯ ರಾಮೋಜಿ ಗೌಡ ಅವರ ಪ್ರಶ್ನೆಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಉತ್ತರಿಸಿ ವಿವಿಧ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿ, ಅಭಿಪ್ರಾಯ ಹಾಗೂ ಸಲಹೆಯನ್ನು ಪಡೆದು ಸೂಕ್ತ ನಿಯಮಗಳನ್ನು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದಾರೆ.

ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ೨ ಎಕರೆವರೆಗೆ  ಭೂ ಪರಿವರ್ತನೆಯ ಅವಶ್ಯಕತೆ ಇಲ್ಲದೆ ನೇರವಾಗಿ ಯೋಜನಾ ಅನುಮೋದನೆ ಮಾಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

***************

ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಯಾವುದೇ ನಿರ್ಬಂಧವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಪ್ರಶ್ನೆವೊಂದಕ್ಕೆ ಉತ್ತರಿಸಿದ ಅವರು, ನರೇಗಾದಡಿ ಸಾಮಗ್ರಿ ವೆಚ್ಚಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಅನುದಾನ ಬಂದಿಲ್ಲ, ಅನುದಾನ ಬಿಡುಗಡೆ ಮಾಡುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಪತ್ರ ಬರೆಯಲಾಗಿದೆ.  ಅದೇ ರೀತಿ ೧೫ನೇ ಹಣಕಾಸು ಆಯೋಗದಲ್ಲಿಯೂ ರಾಜ್ಯಕ್ಕೆ ಸುಮಾರು ೨ ಸಾವಿರದ ೫೦೦ ಕೋಟಿ ರೂಪಾಯಿ ಅನುದಾನ ಬರಬೇಕಿದೆ ಎಂದು ಹೇಳಿದ್ದಾರೆ.

ಅನುದಾನ ಬಂದ ಬಳಿಕ ಗ್ರಾಮ ಪಂಚಾಯತಿಗಳಿಗೆ ಹಣ ಬಿಡುಗಡೆ ಮಾಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

***************

ಬೆಳಗಾವಿಯಲ್ಲಿ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ. ಸಭೆಯಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯಗಳ ಆಯೋಜನೆ ಕುರಿತು ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮೈಕೆಲ್ ಡಿ. ಕುನ್ಹಾ ಸಮಿತಿ ನೀಡಿರುವ ಸಲಹೆಗಳನ್ನು ಹಂತ ಹಂತವಾಗಿ ಪಾಲನೆ ಮಾಡಲಾಗುವುದು. ರಾಜ್ಯದ ಗೌರವ, ಸ್ವಾಭಿಮಾನಕ್ಕೆ ಯಾವುದೇ ಧಕ್ಕೆಯಾಗದ ರೀತಿಯಲ್ಲಿ ಕ್ರಿಕೆಟ್ ಅಭಿಮಾನಿಗಳ ಭಾವನೆಗಳಿಗೆ ಸ್ಪಂದಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ.

***************

ತಳವಾರ ಮತ್ತು ಪರಿವಾರ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತಾದ ಬೇಡಿಕೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದರು.

ಸಭೆಯಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಪ್ರಿಯಾಂಕ್ ಖರ್ಗೆ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ರವಿ ಕುಮಾರ್, ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್, ಶಾಸಕರಾದ ಅಲ್ಲಮ ಪ್ರಭು ಪಾಟೀಲ್, ತಿಪ್ಪಣ್ಣಪ್ಪ ಕಮಕನೂರು ಹಾಜರಿದ್ದರು.

***************

ಧರ್ಮಸ್ಥಳ ಪ್ರಕರಣದ ಹಿಂದಿನ ಪ್ರಮುಖ ಸೂತ್ರಧಾರಿಗಳು ಹಾಗೂ ಹಣಕಾಸು ಸಹಾಯ ನೀಡಿದವರನ್ನು ಎಸ್‌ಐಟಿ ವರದಿಯಲ್ಲಿ ಬಹಿರಂಗ ಪಡಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಗಳ ಚಟುವಟಿಕೆಗಳು ಧಾರ್ಮಿಕ ಸಂಪ್ರದಾಯಗಳ ಬಗ್ಗೆ ಸಾರ್ವಜನಿಕರಲ್ಲಿ ಅನುಮಾನ ಹುಟ್ಟು ಹಾಕಿದೆ ಎಂದು ಆರೋಪಿಸಿದ್ದಾರೆ.

***************

ಭಾರತ-ಶ್ರೀಲಂಕಾ ನಡುವಿನ ಜಂಟಿ ಮಿಲಿಟರಿ ಸಮರಾಭ್ಯಾಸ ಮಿತ್ರ ಶಕ್ತಿ -೨೦೨೫ರ ೧೧ನೇ ಆವೃತ್ತಿಯು ಬೆಳಗಾವಿಯಲ್ಲಿ ಆರಂಭಗೊಂಡಿದೆ. ಇಂದಿನಿಂದ ೨೩ರವರೆಗೆ ಸಮರಾಭ್ಯಾಸ ನಡೆಯಲಿದೆ.

ಭಾರತೀಯ ತುಕಡಿಯು ರಜಪೂತ ರೆಜಿಮೆಂಟ್‌ನ ೧೭೦ ಸಿಬ್ಬಂದಿಯನ್ನು ಒಳಗೊಂಡಿದೆ. ಶ್ರೀಲಂಕಾದ ಗಜಭಾ ರೆಜಿಮೆಂಟ್‌ನ ೧೩೫ ಸಿಬ್ಬಂದಿ ಪಾಲ್ಗೊಂಡಿದ್ದಾರೆ.

ವಿಶ್ವಸಂಸ್ಥೆಯ ಆದೇಶದ ಅಧ್ಯಾಯ ೭ರಡಿಯಲ್ಲಿ ಉಪ ಸಂಪ್ರದಾಯಿಕ ಕಾರ್ಯಾಚರಣೆಗಳ ನಡವಳಿಕೆಯನ್ನು ಜಂಟಿಯಾಗಿ ಪೂರ್ವಾಭ್ಯಾಸ ಮಾಡುವುದು ಈ ಸಮರಾಭ್ಯಾಸದ ಗುರಿಯಾಗಿದೆ.

***************

ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನ ಕಾಫಿ ಸಂಶೋಧನ ಸಂಸ್ಥೆಯ ೧೦೦ ನೇ ವರ್ಷದ ಶತಮಾನೋತ್ಸವ ಕಾರ್ಯಕ್ರಮವನ್ನು ಈ ತಿಂಗಳ ೨೦ ರಿಂದ ೨೨ ರವರೆಗೆ ಹಮ್ಮಿಕೊಳ್ಳಲಾಗಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಭಾರತೀಯ ಕಾಫಿ ಮಂಡಳಿ ಅಧ್ಯಕ್ಷ ದಿನೇಶ್ ದೇವೃಂದ ತಿಳಿಸಿದ್ದಾರೆ.

ದೇಶದಲ್ಲಿ ೭ ಲಕ್ಷ ಟನ್ ಕಾಫಿ ಉತ್ಪಾದಿಸುವ ಗುರಿ ಹೊಂದಲಾಗಿದೆ. ಈ ಹಿನ್ನೆಲೆಯಲ್ಲಿ ಇದಕ್ಕೆ ಪೂರಕವಾದ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ದಿನೇಶ್ ದೇವೃಂದ್

***************

ಕಾಂಡ್ಲಾ ವನಗಳು ಸಾಗರ ತೀರಗಳ ರಕ್ಷಾ ಕವಚ ಇದ್ದಂತೆ ಎಂದು ಕುಮಟಾ ಅರಣ್ಯ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೃಷ್ಣಗೌಡ ತಿಳಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಅಘನಾಶಿನಿ ನದಿ ತೀರದ ಕಿಮಾನಿಯಲ್ಲ ಅರಣ್ಯ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಕಾಂಡ್ಲಾ ಸಂರಕ್ಷಣಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾಂಡ್ಲಾ ವನಗಳು ಅತೀ ಹೆಚ್ಚು ಆಮ್ಲಜನಕ ಉತ್ಪಾದಿಸುವ ಸಸ್ಯ ಪ್ರಬೇಧಗಳಾಗಿರುವುದಿಂದ ಆ ಪ್ರದೇಶದಲ್ಲಿ ವಿಶಿಷ್ಟ ರೀತಿಯ ಜೀವ ವೈವಿಧ್ಯ ಸರಪಳಿಗಳು ಸಹಜವಾಗಿಯೇ ರೂಪುಗೊಳ್ಳುತ್ತವೆ. ಪ್ರಕೃತಿ ವಿಕೋಪ ಸಂದರ್ಭದಲ್ಲಿ ಸುಮಾರು ಶೇಕಡ ೬೫ಕ್ಕಿಂತ ಹೆಚ್ಚಿನ ಪ್ರಮಾಣದ ಅನಾಹುತಗಳನ್ನು ತಡೆಯುವುದರಿಂದ ಕಾಂಡ್ಲಾ ಸಂರಕ್ಷಣೆಯ ಜವಾಬ್ದಾರಿ ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದ್ದಾರೆ.

*******ಮುಕ್ತಾಯ*******